ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

5

ಇಲಾಖೆ / ವಿಷಯ : DEPARTMENT / SUBJECT: ಜಲ ಸಂಪನ್ಮೂಲ - ಮಹದಾಯಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯ ವಾಣಿ ದಿನಾಂಕ : DATE : 1/3/2021

ಮಹದಾಯಿ ವಿವಾದ: ಜಂಟಿ ಸಮಿತಿಗೆ ರಾಜ್ಯದ ಪ್ರತಿನಿಧಿ ನೇಮಕ

ಬೆಂಗಳೂರು: ಮಹದಾಯಿ ವಿವಾದಕ್ಕೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ಆದೇಶದಂತೆ ಜಂಟಿ ಮೇಲುಸ್ತುವಾರಿ ಸಮಿತಿಗೆ ಕರ್ನಾಟಕದ ಪ್ರತಿನಿಧಿಯನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಮಲಪ್ರಭಾ ಎಡದಂಡೆ ಕಾಲುವೆ ವೃತ್ತದ ಅಧೀಕ್ಷಕ ಅಭಿಯಂತರ ಕೃಷ್ಣೋಜಿ ರಾವ್ ಅವರನ್ನು ಜಂಟಿ ಮೇಲುಸ್ತುವಾರಿ ಸಮಿತಿಗೆ ಕರ್ನಾಟಕದ ಪ್ರತಿನಿಧಿಯನ್ನಾಗಿ ನೇಮಿಸಿರುವ ಬಗ್ಗೆ ಮಹಾರಾಷ್ಟ್ರ ಹಾಗೂ ಗೋವಾ ರಾಜ್ಯದ ಜಲಸಂಪನ್ಮೂಲ ಇಲಾಖೆಗೆ ಬರೆದಿರುವ ಪತ್ರದಲ್ಲಿ, ರಾಜ್ಯದ ಜಲಸಂಪನ್ಮೂಲ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಾಕೇಶ್ ಸಿಂಗ್ ತಿಳಿಸಿದ್ದಾರೆ.

ಅಲ್ಲದೇ, ಹಿಡಕಲ್ ಡ್ಯಾಂ ಜಿಆರ್‌ಬಿಸಿ ವೃತ್ತದ ಅಧೀಕ್ಷಕ ಅಭಿಯಂತರ ಆರ್.ಬಿ. ಡ್ಯಾಮಣ್ಣನವರ್ ಅವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ. ಮೇಲುಸ್ತುವಾರಿ ಸಮಿತಿಯು ಮಾರ್ಚ್ ಮೊದಲ ಅಥವಾ ಎರಡನೇ ವಾರದಲ್ಲಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸುಪ್ರೀಂಕೋರ್ಟ್‌ಗೆ ವರದಿ ಸಲ್ಲಿಸಲಿದೆ ಎನ್ನಲಾಗಿದೆ.

ಸುಪ್ರೀಂಕೋರ್ಟ್ ಆದೇಶದಂತೆ ಜಂಟಿ ಮೇಲುಸ್ತುವಾರಿ ಸಮಿತಿಗೆ ಕರ್ನಾಟಕದ ಪ್ರತಿನಿಧಿಗಳನ್ನು ನೇಮಕ ಮಾಡಲಾಗಿದೆ. ಆದರೆ, ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳು ಅವರ ಪ್ರತಿನಿಧಿಗಳನ್ನು ನೇಮಕ ಮಾಡಿರುವ ಬಗ್ಗೆ ಅಧಿಕೃತ ಮಾಹಿತಿ ನಮಗೆ ಇವರೆಗೆ ಬಂದಿಲ್ಲ ಎಂದು ಜಲಸಂಪನ್ಮೂಲ ಇಲಾಖೆಯ ಅಧಿಕಾರಿಗಳು ಹೇಳಿದ್ದಾರೆ.

ಕಳಸಾ ತಿರುವು ಯೋಜನೆ ಮೂಲಕ ಮಲಪ್ರಭಾ ನದಿಗೆ ಮಹದಾಯಿ ನೀರನ್ನು ಅಕ್ರಮವಾಗಿ ಹರಿಸುವ ಮೂಲಕ ಕರ್ನಾಟಕ ಸರ್ಕಾರ ನ್ಯಾಯಾಂಗ ನಿಂದನೆ ಎಸಗಿದೆ ಎಂದು ಆರೋಪಿಸಿ ಗೋವಾ ಸರ್ಕಾರ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ್ದ ಸುಪ್ರೀಂಕೋರ್ಟ್, ಈ ಬಗ್ಗೆ ಕಣಿವೆ ವ್ಯಾಪ್ತಿಯ ಕರ್ನಾಟಕ, ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳ ಸದಸ್ಯರನ್ನೊಳಗೊಂಡ ಜಂಟಿ ಸಮಿತಿ ರಚಿಸಿ, ಸ್ಥಳ ಪರಿಶೀಲನೆ ನಡೆಸಿ, ವಾರದಲ್ಲಿ ವರದಿ ನೀಡುವಂತೆ ಫೆ.22ರಂದು ಆದೇಶ ನೀಡಿತ್ತು. ಇದೇ ವೇಳೆ, ಗೋವಾ ರಾಜ್ಯದ ಆರೋಪವನ್ನು ಕರ್ನಾಟಕ ತಳ್ಳಿಹಾಕಿತ್ತು.